# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2022-23ನೇ ಸಾಲಿನ ಕೊಡವ ಜನಾಂಗದ ಯೋಜನೆಗಳನ್ನು ಅನುಷ್ಠಾನಗೊಳಿಸಲು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ರೂ.10.00 ಕೋಟಿಗಳನ್ನು ಆಯುಕ್ತಾಲಯಕ್ಕೆ ವರ್ಗಾಯಿಸುವ ಕುರಿತು.

**ಓದಲಾಗಿದೆ:-**
1. 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ 173
2. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 382 ಬಿಎಂಎಸ್ 2022, ದಿನಾಂಕ:11.04.2022
3. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ ಇವರ ಪ್ರಸ್ತಾವನೆ ಸಂಖ್ಯೆ:ದೇಹಿನಿ/ಸ/ಕೊಡವ/ಸಿಆರ್-03/2022-23 ದಿನಾಂಕ:13.05.2022.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-173 ರಲ್ಲಿ "ಕೊಡವ ಜನಾಂಗದ ಶ್ರೇಯೋಭಿವೃದ್ಧಿಗಾಗಿ ರೂ.10.00 ಕೋಟಿಗಳ ಮೊತ್ತದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುವುದು" ಎಂದು ಘೋಷಿಸಿರುವಂತೆ ಈ ಘೋಷಣೆಯ ಅನುಷ್ಠಾನಕ್ಕೆ ಸರ್ಕಾರವು 2022-23 ನೇ ಸಾಲಿನಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಕ್ಕೆ ಲೆಕ್ಕಶೀರ್ಷಿಕೆ:2225-03-190-0-04 ರಲ್ಲಿ ಒದಗಿಸಿರುವ ರೂ.100.00 ಕೋಟಿಗಳ ಅನುದಾನದಲ್ಲಿಯೇ ರೂ.10.00 ಕೋಟಿಗಳ ಅನುದಾನಕ್ಕೆ ಕೊಡವ ಜನಾಂಗದ ಶ್ರೇಯೋಭಿವೃದ್ಧಿಗಾಗಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (2) ರ ಆದೇಶದಲ್ಲಿ ಕೊಡವ ಜನಾಂಗದ ಶ್ರೇಯೋಭಿವೃದ್ಧಿಗಾಗಿ 2022-23ನೇ ಸಾಲಿನಲ್ಲಿ ರೂ.10.00 ಕೋಟಿಗಳ ಅನುದಾನದಲ್ಲಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಕ್ರಿಯಾ ಯೋಜನೆಗೆ ಸರ್ಕಾರದ ಅನುಮೋದನೆ ನೀಡಿ ಆದೇಶಿಸಲಾಗಿದೆ.

(ರೂ.ಲಕ್ಷಗಳಲ್ಲಿ)

| ಕ್ರ.ಸಂ | ಯೋಜನೆಯ ಹೆಸರು | ಮಂಜೂರು ಮಾಡಿದ ಅಂದಾಜು ಮೊತ್ತ |
|---|---|---|
| 1 | ಕೊಡವ ಸಮಾಜಗಳ ಒಕ್ಕೂಟಕ್ಕೆ ಕೊಡವ ಸಾಂಸ್ಕೃತಿಕ/ಮ್ಯೂಸಿಯಂ ಇತ್ಯಾದಿ ಅಭಿವೃದ್ಧಿಗಾಗಿ | 600.00 |
| 2 | ಭಾಗಮಂಡಲದಲ್ಲಿ ಕೊಡವ ಸಭಾ ಭವನ ನಿರ್ಮಾಣ | 100.00 |
| 3 | 30 ಕೊಡವ ಸಮುದಾಯ ಭವನ (ಪ್ರತಿ ಭವನಕ್ಕೆ ರೂ.10.00 ಲಕ್ಷ) ನಿರ್ಮಾಣ | 300.00 |
| ಒಟ್ಟು | | 1000.00 |

ಮೇಲೆ ಓದಲಾದ (3)ರಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಹಿಂದುಳಿದ ವರ್ಗಗಳ ಜನರಿಗೆ ಸಾಲ ಹಾಗೂ ಸಹಾಯಧನ ಸೌಲಭ್ಯ ಒದಗಿಸುವ ವಿವಿಧ ಯೋಜನೆಗಳ ಅಗತ್ಯ ಮಾರ್ಗಸೂಚಿಗಳು ಲಭ್ಯವಿದ್ದು, ಅನುಷ್ಠಾನಗೊಳಿಸಲು ಅನುಭವವಿರುತ್ತದೆ. ಸಮುದಾಯ ಭವನ ನಿರ್ಮಾಣದ ಕುರಿತು ಇದುವರೆವಿಗೂ ನಿಗಮದಿಂದ ಯಾವುದೇ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿರುವುದಿಲ್ಲ. ಆದ್ದರಿಂದ ಕೊಡವ ಜನಾಂಗದ ಶ್ರೇಯೋಭಿವೃದ್ಧಿಗಾಗಿ ಸರ್ಕಾರದಿಂದ ಅನುಮೋದಿತ ಕ್ರಿಯಾ ಯೋಜನೆಯನ್ನು

17/10/22

...2

ಅನುಷ್ಠಾನಗೊಳಿಸುವ ಸಂಬಂಧ ಸೂಕ್ತ ಮಾರ್ಗಸೂಚಿಗಳನ್ನು ನೀಡುವಂತೆ ಕೋರಿ ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 382 ಬಿಎಂಎಸ್ 2022,</u>**

**<u>ಬೆಂಗಳೂರು, ದಿನಾಂಕ:17-10- 2022.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನಲ್ಲಿ ಕೊಡವ ಜನಾಂಗದ ಶ್ರೇಯೋಭಿವೃದ್ಧಿಗಾಗಿ ರೂ.10.00 ಕೋಟಿಗಳ ಅನುದಾನದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಈಗಾಗಲೇ ಸರ್ಕಾರದಿಂದ ಅನುಮೋದಿತ ಕ್ರಿಯಾ ಯೋಜನೆಯನ್ವಯ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಸದರಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವಂತೆ ತಿಳಿಸಿದೆ.

2022-23 ನೇ ಸಾಲಿನಲ್ಲಿ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಕ್ಕೆ ಲೆಕ್ಕಶೀರ್ಷಿಕೆ:2225-03-190-0-04 ರಲ್ಲಿ ಒದಗಿಸಿರುವ ರೂ.100.00 ಕೋಟಿಗಳ ಅನುದಾನದಲ್ಲಿ ಸದರಿ ಉದ್ದೇಶಕ್ಕೆ ನಿಗಧಿಪಡಿಸಿದ ರೂ.10.00 ಕೋಟಿಗಳ ಅನುದಾನವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮ ಲೆಕ್ಕಶೀರ್ಷಿಕೆ:2225-03-0-001-0-05 (103)ಗೆ ವರ್ಗಾಯಿಸಲು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ ಇವರು ಅಗತ್ಯ ಕ್ರಮವಹಿಸುವುದು.

ಈ ಆದೇಶವನ್ನು ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Shaheenparveen 17/10/2022

**(ಷಾಹೀನ್ ಪರ್ವೀನ್.ಕೆ )**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

17/10

**<u>ಇವರಿಗೆ:-</u>**

1. ಪ್ರಧಾನ ಮಹಾಲೇಖಪಾಲರು,(ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
4. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.

**<u>ಪ್ರತಿ ಮಾಹಿತಿಗಾಗಿ:-</u>**

1. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ.
3. ಶಾಖಾ ರಕ್ಷಾ ಕಡತ.

***********